O.S.No.:106/2025
P.W.:1

ಈ ದಿನ ದಿಃ13.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಹೆಚ್.ಎಲ್.ಎ ರವರಿಂದಃ-**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ದಿನಾಂಕ.28.01.2008 ರ ನೊಂದಾಯಿತ ಶುದ್ದ ಕ್ರಯದ ಕರಾರು ಪತ್ರದ ವಿಧ್ಯುತ್ಮಾನ ಸಹಿವುಳ್ಳ ಕ್ಯೂ.ಆರ್ ಕೋಡ್ ಹೊಂದಿರುವ ಪ್ರತಿಯನ್ನು ಹಾಜರು ಪಡಿಸಿದ್ದೇನೆ. ಇದರ ಮೂಲಪ್ರತಿಯು ಪ್ರತಿವಾದಿಗಳ ಬಳಿ ಇರುತ್ತದೆ. ಸದರಿ ದಾಖಲೆಯನ್ನು ಸಾಬೀತುಪಡಿಸುವ ಹೊಣೆಗಾರಿಕೆಯನ್ನು ವಾದಿಯ ಮೇಲೆ ಹೊರೆಸಿ ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಒಂದು ಋಣಭಾರ ರಾಹಿತ್ಯ ಪ್ರಮಾಣ ಪತ್ರದ ವಿಧ್ಯುತ್ಮಾನ ಸಹಿವುಳ್ಳ ಕ್ಯೂ.ಆರ್ ಕೋಡ್ ಹೊಂದಿರುವ ಪ್ರತಿಯನ್ನು ಹಾಜರು ಪಡಿಸಿದ್ದೇನೆ. ಸದರಿ

ದಾಖಲೆಯನ್ನು ಸಾಬೀತುಪಡಿಸುವ ಹೊಣೆಗಾರಿಕೆಯನ್ನು ವಾದಿಯ ಮೇಲೆ ಹೊರೆಸಿ ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಸರ್ವೆ ನಂ. 23/4 ಜಮೀನಿಗೆ ಸಂಬಂಧಿಸಿದಂತೆ 2024-2025ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**